ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 227

2 ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು)

3 ಉತ್ತರಿಸುವ ದಿನಾಂಕ : 17-02-2022

4 ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರಸಂ	ಪ್ರಶ್ನೆ	ಉತ್ತರ
ಅ	ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು 20x30 ಇ.ಡಬ್ಲ್ಯೂ.ಎಸ್ ನಾರಾಯಣನಗರ ಅಂಜನಾಪುರ ಬಳಿ ಹಂಚಿಕೆಯಾದ ಸೈಟ್‌ಗಳಲ್ಲಿ ರಾಜಕಾಲುವೆಯನ್ನು ಮುಚ್ಚಿ ದಾರಿ ಮತ್ತು ಮನೆಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ದವರು ಹಂಚಿಕೆ ಮಾಡಿರುವ ಇ.ಡಬ್ಲ್ಯೂ.ಎಸ್ ನಾರಾಯಣನಗರ ಸೈಟುಗಳಲ್ಲಿ ಹರಿಯುತ್ತಿರುವ ರಾಜಕಾಲುವೆಗಳ ಸರ್ವೆ ಕಾರ್ಯ ಕೈಗೊಂಡು ಗಡಿಗಳನ್ನು ಹಾಗೂ ಒತ್ತುವರಿಗಳನ್ನು ಸ್ಥಳದಲ್ಲಿ ಗುರುತಿಸಿಕೊಡಲು ಕೋರಿ ಭೂದಾಖಲೆಗಳ ಸಹಾಯಕ ನಿರ್ದೇಶಕರು, ಬೆಂಗಳೂರು ದಕ್ಷಿಣ ತಾಲ್ಲೂಕು, ಕಂದಾಯ ಇಲಾಖೆ ರವರಿಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿಯಿಂದ ಪತ್ರ ಬರೆಯಲಾಗಿರುತ್ತದೆ.
ಆ	ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು)	
ಇ	ಸರ್ಕಾರ ಕೂಡಲೇ ಈ ಬಗ್ಗೆ ಗಮನಹರಿಸಿ ರಾಜಕಾಲುವೆ ಮೇಲೆ ಮನೆ ನಿರ್ಮಿಸಲು ಅವಕಾಶ ಮಾಡಿಕೊಡದಿರಲು ಕ್ರಮಕೈಗೊಳ್ಳುವಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸೂಚಿಸಲಾಗುವುದೇ?	ಭೂದಾಖಲೆಗಳ ಕಛೇರಿ, ಕಂದಾಯ ಇಲಾಖೆ, ಬೆಂಗಳೂರು ಇವರಿಂದ ನೀರುಗಾಲುವೆಗಳ ಸರ್ವೆ ಕಾರ್ಯ ಕೈಗೊಂಡು ಗಡಿಗಳನ್ನು ಹಾಗೂ ಒತ್ತುವರಿಗಳನ್ನು ಗುರುತಿಸಿ ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಕಛೇರಿಗೆ ನೀಡಿದ ನಂತರದಲ್ಲಿ ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಮುಂದಿನ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ನಅಇ 61 ಎಂಎನ್‌ವೈ 2022 (ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ